# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು - 572 103

ಸಂಖ್ಯೆ:ತುವಿ:ಶೈವಿ:2022–23:4115 ದಿನಾಂಕ:29.11.2022

## ಸುತ್ತೋಲೆ

**ವಿಷಯ: NASSCOM ವತಿಯಿಂದ ಎರಡನೇ ವರ್ಷದ ಸ್ನಾತಕ ವಿದ್ಯಾರ್ಥಿಗಳಿಗೆ Artificial Intelligence ಕೌಶಲ್ಯಾಭಿವೃದ್ಧಿ ಪತ್ರಿಕೆ ನೀಡುವ ಕುರಿತು**

**ಉಲ್ಲೇಖ: ಈ ಕಚೇರಿ ಸುತ್ತೋಲೆ ಸಂಖ್ಯೆ:ತುವಿ:ಶೈವಿ:2022–23:4005 ದಿನಾಂಕ 18.11.2022**

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2022–23ನೇ ಶೈಕ್ಷಣಿಕ ಸಾಲಿನ ಎಲ್ಲಾ ಸ್ನಾತಕ ಪದವಿ ವಿದ್ಯಾರ್ಥಿಗಳಿಗೆ Aritificial Intelligence ಎಂಬ ಕೌಶಲ್ಯಾಭಿವೃದ್ಧಿ ಪತ್ರಿಕೆಯು ಕಡ್ಡಾಯವಾಗಿರುತ್ತದೆ. ಹಾಗಾಗಿ, ಎಲ್ಲಾ ಕಾಲೇಜುಗಳಲ್ಲಿ ಈ ಪತ್ರಿಕೆಯನ್ನು ಬೋಧಿಸಲು ಬೋಧಕರನ್ನು ನಿಯೋಜಿಸಲು ಉಲ್ಲೇಖಿತ ಸುತ್ತೋಲೆಯಲ್ಲಿ ತಿಳಿಸಲಾಗಿತ್ತು. ಪ್ರಸ್ತುತ, ನಿಯೋಜಿತ ಬೋಧಕರಿಗೆ ದಿನಾಂಕ 07.12.2022 ರಂದು ಪೂರ್ವಾಹ್ನ ಮೊದಲನೇ ಹಂತದ ಆನ್‌ಲೈನ್ ತರಬೇತಿ ಕಾರ್ಯಾಗಾರ ನಡೆಸಲಾಗುವುದು. ದಿನಾಂಕ 08.12.2022 ರಂದು ಆಫ್‌ಲೈನ್ ತರಬೇತಿ ಕಾರ್ಯಾಗಾರವನ್ನು ವಿಶ್ವವಿದ್ಯಾನಿಲಯದ ಸರ್. ಎಂ.ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ಪೂರ್ವಾಹ್ನ 10 ಗಂಟೆಗೆ ಏರ್ಪಡಿಸಲಾಗಿರುತ್ತದೆ. ಹಾಗೂ ದಿನಾಂಕ:12.12.2022 ರಂದು ಎರಡನೇ ಹಂತದ ಆನ್‌ಲೈನ್ ತರಬೇತಿ ಕಾರ್ಯಾಗಾರ ನಡೆಸಲಾಗುವುದು. ಎರಡೂ ಹಂತಗಳ ಆನ್‌ಲೈನ್ ತರಬೇತಿ ಕಾರ್ಯಾಗಾರಗಳ ಲಿಂಕ್‌ನ್ನು ಮುಂದಿನ ದಿನಗಳಲ್ಲಿ ಕಳುಹಿಸಲಾಗುವುದು. ಸದರಿ ಪತ್ರಿಕೆ ಬೋಧಕರು ಕಡ್ಡಾಯವಾಗಿ ಕಾರ್ಯಾಗಾರದಲ್ಲಿ ಭಾಗವಹಿಸಲು ಸೂಚಿಸಲಾಗಿದೆ.

ಆದೇಶದ ಮೇರೆಗೆ,

Mangalahome H

ಉಪಕುಲಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ,
ತುಮಕೂರು

ಗೆ,

ಪ್ರಾಂಶುಪಾಲರು, ಘಟಕ ಮತ್ತು ಎಲ್ಲಾ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು

ಪ್ರತಿಗಳು:

1. ಕುಲಸಚಿವರು (ಮೌಲ್ಯಮಾಪನ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಕಾರ್ಯಪಾಲಕ ಅಭಿಯಂತರರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
4. ಸಿಸ್ಟಂ ಅನಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. – ಪ್ರಾಂಶುಪಾಲರು, ಘಟಕ ಮತ್ತು ಸಂಯೋಜಿತ ಕಾಲೇಜುಗಳು, ತುಮಕೂರು ಇವರಿಗೆ ಇ-ಮೇಲ್ ಕಳುಹಿಸುವುದು ಮತ್ತು ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
5. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಕಚೇರಿ ಪ್ರತಿ.